



ಅರುಣ ಪಿ. ಭಟ್ಟ

## ವಾರದ ಭವಿಷ್ಯ 26.12.2019ರಿಂದ 1.1.2020ರವರೆಗೆ




ವಾರದ ಶುರುವಿನಲ್ಲಿ ನಿಮ್ಮ ಮುಖದ ಸೌಂದರ್ಯ ಹೆಚ್ಚಾಗಲಿದೆ. ಸಂತೋಷದ ಕಾರಣಕ್ಕೆ ಹೀಗಾಗಬಹುದು. ಉದ್ಯಮ ವ್ಯಾಪಾರ ನಡೆಸುತ್ತಿರುವವರಿಗೆ ಲಾಭವಿದೆ. ಹೊಸ ಉತ್ಸಾಹ ನಿಮ್ಮಲ್ಲಿ ಕಾಣಿಸಿಕೊಳ್ಳಲಿದೆ.

**ಶುಭದಿನ 27. ಹನುಮಾನ್ ಚಾಲೀಸ್ ಪಠಿಸಿರಿ.**




ಉದ್ಯೋಗದಲ್ಲಿ ಉತ್ತಮವಾದ ಪ್ರಗತಿ ಇದೆ. ಉದ್ಯೋಗ ಸ್ಥಳದಲ್ಲಿ ಮೆಚ್ಚುಗೆ ಮಾತುಗಳನ್ನು ಕೇಳಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯನ್ನು ಮೆಚ್ಚಿಸುವ ಸಲುವಾಗಿ ಉಡುಗೊರೆಗಳನ್ನು ನೀಡಲಿದ್ದೀರಿ.

**ಶುಭದಿನ 27. ಗಣೇಶ ಪಂಚರತ್ನ ಪಠಿಸಿರಿ.**




ವಾರದ ಆರಂಭದಲ್ಲಿ ವೃತ್ತಿ ಬದುಕಿನಲ್ಲಿ ಬೆಳವಣಿಗೆಗೆ ಅದ್ಭುತ ಅವಕಾಶಗಳಿವೆ. ಇನ್ನು ಹಣಕಾಸು ಪರಿಸ್ಥಿತಿ ಉತ್ತಮಪಡಿಸಿಕೊಳ್ಳುವ ಅವಕಾಶ ನಿಚ್ಚಳವಾಗಿ ಗೋಚರಿಸುತ್ತದೆ. ಕನಸಿನ ಸಾಕಾರಕ್ಕೆ ಪ್ರಯತ್ನಿಸುತ್ತೀರಿ.

**ಶುಭದಿನ 28. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.**




ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಅನುಕೂಲವಿದೆ. ಸೇವಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಹಾಗೂ ವ್ಯಾಪಾರ ವಲಯದಲ್ಲಿ ತೊಡಗಿರುವವರಿಗೆ ಉತ್ತಮ ಅನುಕೂಲವಿದೆ. ಬಡ್ತಿ ವೇತನ ಹೆಚ್ಚಳ ಆಗುವ ಸಾಧ್ಯತೆ ಇದೆ.

**ಶುಭದಿನ 29. ಗಣಪತಿಗೆ 108 ದೂರ್ವಾರ್ಚನೆ ಮಾಡಿರಿ.**




ಉದ್ಯೋಗ ಸ್ಥಳದಲ್ಲಿ ಪ್ರಗತಿಗಾಗಿ ಭಾರೀ ಶ್ರಮ ಹಾಕಲಿದ್ದೀರಿ. ಒಂದಲ್ಲ ಒಂದು ಕೆಲಸವನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವ ಒತ್ತಡ ಇದ್ದೇ ಇರುತ್ತದೆ. ಕೆಲವು ಕಾನೂನು ತೊಡಕುಗಳನ್ನು ಎದುರಿಸಬೇಕಾಗುತ್ತದೆ.

**ಶುಭದಿನ 30. ಕಾಲಭೈರವನ ಸೇವೆ ಮಾಡಿರಿ.**




ಸಾಹಿತ್ಯ ಸಿನಿಮಾ, ಸೈನ್ಯ ಮತ್ತು ಭದ್ರತೆ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲ. ನೀವು ಪಟ್ಟ ಶ್ರಮಕ್ಕೆ ಅದ್ಭುತವಾದ ಅನುಕೂಲಗಳು ದೊರೆಯಲಿವೆ. ಪೋಷಕರ ಜತೆಗೆ ಹೆಚ್ಚು ಸಮಯ ಕಳೆಯಲು ಸಾಧ್ಯವಾಗದು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿ ಇದೆ.

**ಶುಭದಿನ 31. ಸೌಂದರ್ಯ ಲಹರಿ ಪಠಿಸಿರಿ.**




ವಸ್ತುಗಳನ್ನು ಖರೀದಿ ಮಾಡುವ ಮುತುವರ್ಜಿ ವಹಿಸಿ. ನೀವು ಹಾಕಿದ ಶ್ರಮಕ್ಕೆ ಯಶಸ್ಸು ಸಿಗಲಿದೆ. ಉದ್ಯೋಗ ವೃತ್ತಿ ಜೀವನದಲ್ಲಿ ನಿರೀಕ್ಷಿತ ಯಶಸ್ಸು ದೊರೆಯಲಿದೆ. ಆ ಮೂಲಕ ನಿಮ್ಮ ಕನಸನ್ನು ಈಡೇರಿಸಿಕೊಳ್ಳಲಿದ್ದೀರಿ.

**ಶುಭದಿನ 28. ಲಿಂಗಾಷ್ಟಕ ಪಠಿಸಿರಿ.**




ಹೆಚ್ಚುವರಿ ಆದಾಯ ಮೂಲದಿಂದ ನಿರೀಕ್ಷಿತ ಆದಾಯ ಬರದಿರಬಹುದು. ಈ ವಿಚಾರದಲ್ಲಿ ನಿಮ್ಮ ವಿವೇಚನೆಯನ್ನು ಸರಿಯಾಗಿ ಬಳಸಿ. ಇನ್ನು ಗೆಳೆಯರ ಜತೆಗೆ ಒತ್ತಡದ ಸನ್ನಿವೇಶವನ್ನು ಎದುರಿಸುತ್ತೀರಿ.

**ಶುಭದಿನ 28. ಚಂಡಿ ಪಾರಾಯಣ ಮಾಡಿರಿ.**




ಶೈಕ್ಷಣಿಕ ರಂಗದಲ್ಲಿ ಪ್ರಗತಿ ಇದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಯಶಸ್ಸು ನಿಮ್ಮದಾಗಲಿದೆ. ಸಂಗಾತಿ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಹಣಕಾಸು ವಿಚಾರದಲ್ಲಿ ನಿರೀಕ್ಷಿತವಾದ ಪ್ರಗತಿ ಆಗಲಿದೆ. ಹಣಕಾಸು ಹೂಡಿಕೆಯಲ್ಲಿ ಪ್ರಗತಿ.

**ಶುಭದಿನ 28. ದತ್ತ ಗುರುಚರಿತ್ರೆ ಪಠಿಸಿರಿ.**




ನಿಮಗೆ ಈಗಿರುವ ಗ್ರಹಗತಿಗಳನ್ನು ಗಮನಿಸಿದರೆ ಸಂಸ್ಥೆಯೊಂದರ ಜತೆಗೆ ದೀರ್ಘಾವಧಿ ಒಪ್ಪಂದಕ್ಕೆ ಬರುವ ಸಾಧ್ಯತೆಗಳಿವೆ. ಇನ್ನು ವ್ಯಾಪಾರ ಉದ್ಯಮವನ್ನು ವಿಸ್ತರಿಸಲು ವಿಶಿಷ್ಟ ಅವಕಾಶಗಳು ದೊರೆಯಬಹುದು.

**ಶುಭದಿನ 29. ನವಗ್ರಹ ಆರಾಧನೆ ಮಾಡಿರಿ.**




ವಾರದ ಶುರುವಿನಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಆಯಾ ಉದ್ಯೋಗ ವೃತ್ತಿ ಕ್ಷೇತ್ರದಲ್ಲಿ ಉತ್ತಮ ಪ್ರಗತಿ. ಅಸ್ತವ್ಯಸ್ತವಾಗಿ ನಿಂತುಹೋಗಿದ್ದ ಕೆಲಸ ಕಾರ್ಯಗಳನ್ನು ಕೈಗೆತ್ತಿಕೊಂಡು, ಗಡುವಿನೊಳಗೆ ಪೂರ್ಣಗೊಳಿಸಲಿದ್ದೀರಿ.

**ಶುಭದಿನ 30. ವಿಷ್ಣು ಸಹಸ್ರನಾಮ ಮಾಡಿರಿ.**




ವಾರದ ಶುರುವಿನಲ್ಲಿ ಭೂಮಿ ಖರೀದಿ. ಬಹಳ ಕಾಲದಿಂದ ಅಂದುಕೊಂಡು ಬಂದಂಥ ಕೆಲಸಗಳಲ್ಲಿ ಪ್ರಗತಿಯಾಗಲಿದೆ. ಉದ್ಯೋಗ ವಿಚಾರವಾಗಿ ದೂರಪ್ರಯಾಣ ಮಾಡಬೇಕಾಗುತ್ತದೆ. ಆರೋಗ್ಯದಲ್ಲಿ ಸಮಸ್ಯೆ.

**ಶುಭದಿನ 29. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.**


